ಕರ್ನಾಟಕ ವಿಧಾನ ಸಭೆ

ಮಂಗಳವಾರ 27ನೇ ನವೆಂಬರ್ 1990 ಮಾರ್ಗಶಿರ 6, ಶಕ 1912

ಸದನವು ವಿಧಾನ ಸೌಧದಲ್ಲಿರುವ ವಿಧಾನ ಸಭೆಯ ಸಭಾಂಗಣದಲ್ಲಿ

ಬೆಳಿಗ್ಗೆ 11–05 ಗಂಟೆಗೆ

ಸಮಾವೇಶಗೊಂಡಿತು

ಅಧ್ಯಕ್ಷರು (ಶ್ರೀ ಎಸ್.ಎಂ. ಕೃಷ್ಣ) ಅವರು ಪೀಠವನ್ನು ಅಲಂಕರಿಸಿದರು

ಸಂತಾಪ ಸೂಚನೆ

ಅಧ್ಯಕ್ಷರು:

ಮೈಸೂರು ಪ್ರಜಾಪ್ರತಿನಿಧಿ ಸಭೆಯ ಹಾಗೂ ವಿಧಾನ ಪರಿಷತ್ತಿನ ಮಾಜಿ ಸದಸ್ಯರಾಗಿದ್ದ ಶ್ರೀ ಕೆ. ರಂಗಪ್ಪ ಅವರು ದಿನಾಂಕ: 26–11–1990 ರಂದು ನಿಧನ ಹೊಂದಿದರೆಂದು ಈ ಸದನಕ್ಕೆ ತಿಳಿಸಲು ವಿಷಾದಿಸುತ್ತೇನೆ.

ಶ್ರೀಯುತರು 1945 ರಿಂದ 50ರ ವರೆಗೆ ಮೈಸೂರು ಪ್ರಜಾಪ್ರತಿನಿಧಿ ಸಭೆಯ ಸದಸ್ಯರಾಗಿ ನಂತರ 1955 ರಿಂದ 1956, 1956 ರಿಂದ 1962 ಹಾಗೂ 1972 ರಿಂದ 1978ರ ವರೆಗೆ ವಿಧಾನ ಪರಿಷತ್ತಿನ ಸದಸ್ಯರಾಗಿ ಸೇವೆಯನ್ನು ಸಲ್ಲಿಸಿರುತ್ತಾರೆ. 1956ರಲ್ಲಿ ವಿಧಾನ ಪರಿಷತ್ತಿನ ಉಪ ಮುಖ್ಯ ಸಚೇತಕರಾಗಿಯೂ ಸಹ ಸೇವೆ ಸಲ್ಲಿಸಿರುತ್ತಾರೆ. ಶ್ರೀಯುತರು ಸಮಾಜದ ವಿವಿಧ ಕ್ಷೇತ್ರದಲ್ಲಿ ಅದರಲ್ಲೂ ಶಿಕ್ಷಣ ಕ್ಷೇತ್ರದಲ್ಲಿ ಗಣನೀಯವಾದ ಸೇವೆ ಸಲ್ಲಿಸುರುವುದು ಗಮನಾರ್ಹವಾಗಿದೆ. ಸ್ವಾತಂತ್ರ್ಯ ಚಳುವಳಿ ಹಾಗೂ 1942ರ ಅರಣ್ಯ ಸತ್ಯಾಗ್ರಹ ಚಳುವಳಿಯಲ್ಲಿ ಸಕ್ರಿಯವಾಗಿ ಭಾಗವಹಿಸಿದ ಕೀರ್ತಿ ಶ್ರೀಯುತರದಾಗಿರುತ್ತದೆ.

ಮೃತರ ಗೌರವಾರ್ಥ ಮಾನ್ಯ ಸದಸ್ಯರು ಎದ್ದು ನಿಂತು ಒಂದು ನಿಮಿಷ ಮೌನವನ್ನು ಆಚರಿಸಬೇಕೆಂದು ಕೇಳಿಕೊಳ್ಳುತ್ತೇನೆ.

(ಮಾನ್ಯ ಸದಸ್ಯರು ಒಂದು ನಿಮಿಷ ಮೌನ ಆಚರಿಸಿದರು)

ದಿವಂಗತರ ಕುಟುಂಬ ವರ್ಗದವರಿಗೆ ಈ ಸಭೆ ಅಂಗೀಕರಿಸಿದ ಸಂತಾಪ ಸೂಚನಾ ನಿರ್ಣಯವನ್ನು ಕಳುಹಿಸಿಕೊಡಲಾಗುವುದು.

(ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಬಾಯಿ ಮಾತಿನ ಮೂಲಕ ನೀಡಲಾದ ಉತ್ತರಗಳು)

ಕಪ್ಪು ಹಲಗೆ ಯೋಜನೆಯಡಿಯಲ್ಲಿ ಮಂಜೂರಾದ ಶಾಲೆಗಳು

416. ಶ್ರೀ ಬಿ.ಎಂ. ಇದಿನಬ್ಬ (ಉಳ್ಳಾಲ):– ಮಾನ್ಯ ಶಿಕ್ಷಣ ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಪ್ಪು ಹಲಗೆ ಯೋಜನೆಯಡಿಯಲ್ಲಿ ಮಂಜೂರಾಗಿರುವ ಶಾಲೆಗಳಿಗಾಗಿ ಕೊಠಡಿಗಳ ಸಂಖ್ಯೆ ಎಷ್ಟು?

ಆ) ಇವುಗಳ ನಿರ್ಮಾಣವು ಕಾರ್ಯ ಪೂರ್ಣವಾಗಿದೆಯೆ ನಿರ್ಮಾಣ ಕಾರ್ಯ ಪ್ರಾರಂಭವಾಗದಿರುವ ಶಾಲಾ ಕೊಠಡಿಗಳ ಸಂಖ್ಯೆ ಎಷ್ಟು?

ಇ) ಈ ನಿರ್ಮಾಣ ಕಳಪೆ ಕೆಲಸವಾಗಿದೆಯೆಂಬ ಕುರಿತು ಸರ್ಕಾರಕ್ಕೆ ದೂರುಗಳು ಬಂದಿವೆಯೇ?

ಈ) ಹಾಗಿದ್ದಲ್ಲಿ ಈ ಬಗ್ಗೆ ಕೈಗೊಂಡ ಕ್ರಮಗಳೇನು?